# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 534 (593) |
| ಸದಸ್ಯರ ಹೆಸರು | ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 11.12.2025 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | 384 ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳಿಗೆ ಡಿಸೆಂಬರ್ 29ರಂದು ಎರಡನೇ ಬಾರಿಯೂ ನಡೆದ ಪೂರ್ವಭಾವಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಯಲ್ಲೂ ಭಾಷಾಂತರ ಲೋಪ ದೋಷಗಳು ಪುನರಾವರ್ತನೆಯಾಗಿದ್ದರಿಂದ ಇದುವರೆಗೂ ಈ ಅವಾಂತರಕ್ಕೆ ಕಾರಣರಾದ ಕೆಪಿಎಸ್‌ಸಿ ಯ ಯಾವ ಯಾವ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ; ಅನ್ಯಾಯಕ್ಕೊಳಗಾದ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆ ಯಾವ ರೀತಿ ನ್ಯಾಯ ಒದಗಿಸಬಹುದಾಗಿದೆ; (ವಿವರ ನೀಡುವುದು) | ಕಾಲೇಜು / ವಿಶ್ವವಿದ್ಯಾಲಯಗಳಲ್ಲಿ ತಾಂತ್ರಿಕ ಮತ್ತು ವಿಜ್ಞಾನ ವಿಷಯಗಳನ್ನು ಕನ್ನಡದಲ್ಲಿ ಬೋಧನೆ ಮಾಡದೇ ಇರುವುದರಿಂದ ಹಾಗೂ ಕನ್ನಡದಲ್ಲಿ ಹೆಚ್ಚಿನ ತಾಂತ್ರಿಕ ವಿಷಯಗಳಿಗೆ ಸಂಬಂಧಿಸಿದಂತೆ ಪುಸ್ತಕಗಳು ಲಭ್ಯವಿಲ್ಲದಿರುವುದರಿಂದ ವಿಷಯ ತಜ್ಞರುಗಳು ಆಂಗ್ಲ ಭಾಷೆಯಲ್ಲಿ ಪ್ರಶ್ನೆ ಪತ್ರಿಕೆಗಳನ್ನು ಸಿದ್ಧಪಡಿಸುತ್ತಿದ್ದು, ಪ್ರಶ್ನೆಗಳನ್ನು ನುರಿತ ಭಾಷಾಂತರಕಾರರನ್ನು ನಿಯೋಜಿಸಿ ಆಂಗ್ಲ ಭಾಷೆಯಿಂದ ಕನ್ನಡಕ್ಕೆ ಭಾಷಾಂತರಿಸಲಾಗಿರುತ್ತದೆ. ಇದು ಅತ್ಯಂತ ಗೋಪ್ಯ ಸ್ವರೂಪದ ಕಾರ್ಯವಾಗಿರುವುದರಿಂದ ಸಂಬಂಧಪಟ್ಟ ಭಾಷಾಂತರಕಾರರು ಭಾಷಾಂತರ ಮಾಡಿದ ನಂತರ ಪ್ರಶ್ನೆಗಳ ಗೋಪ್ಯತೆಯನ್ನು ಕಾಪಾಡುವ ದೃಷ್ಟಿಯಿಂದ ಪ್ರಶ್ನೆಗಳ ಭಾಷಾಂತರವನ್ನು ಮತ್ತೊಮ್ಮೆ ಪರಿಶೀಲಿಸಲಾಗುವುದಿಲ್ಲವಾದ್ದರಿಂದ ಇದರಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಅಧಿಕಾರಿಗಳ ಪಾತ್ರ ಇರುವುದಿಲ್ಲ.<br><br>384 ಗೆಜೆಟೆಡ್ ಪ್ರೊಬೆಷನರುಗಳ ಪೂರ್ವಭಾವಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಯ ಭಾಷಾಂತರವನ್ನು ಪರಿಶೀಲಿಸಲು ಉತ್ತಮ ಕನ್ನಡ ಭಾಷಾ ಜ್ಞಾನವನ್ನು ಹೊಂದಿರುವ ಹಾಗೂ ಆಯಾ ವಿಷಯಗಳಲ್ಲಿ ಪರಿಣಿತಿ ಹೊಂದಿರುವಂತಹ ಮೂವರು ವಿಷಯ ತಜ್ಞರುಗಳನ್ನೊಳಗೊಂಡ 12 ವಿಷಯಗಳ ವಿಷಯ ತಜ್ಞರುಗಳ ಸಮಿತಿಗಳನ್ನು ರಚಿಸಿ ಅಭಿಪ್ರಾಯವನ್ನು ಪಡೆಯಲಾಗಿದ್ದು, ಕೆಲವು ಪ್ರಶ್ನೆಗಳಲ್ಲಿ ಯಾವುದೇ ಭಾಷಾಂತರ ವ್ಯತ್ಯಾಸ ಇರುವುದಿಲ್ಲವೆಂದು, ಕೆಲವು ಪ್ರಶ್ನೆಗಳಲ್ಲಿ ಕಾಗುಣಿತಾಕ್ಷರಗಳ ಮುದ್ರಣ ದೋಷವಾಗಿರುವುದಾಗಿಯೂ, ಕೆಲವು ಪ್ರಶ್ನೆಗಳಲ್ಲಿ ವ್ಯತ್ಯಾಸವಿದ್ದರೂ ಸಹ ಪ್ರಶ್ನೆಯನ್ನು ಅರ್ಥೈಸಿಕೊಂಡು ಕೀ ಉತ್ತರವನ್ನು ಗುರುತಿಸಬಹುದಾಗಿದೆ ಎಂದು ಹಾಗೂ ಭಾಷಾಂತರ ಹಾಗೂ ತಾಂತ್ರಿಕ ದೋಷದಿಂದ 5 ಪ್ರಶ್ನೆಗಳಿಗೆ ಕೃಪಾಂಕ ಹಾಗೂ 1 ಪ್ರಶ್ನೆಯ ಕೀ ಉತ್ತರವನ್ನು ಪರಿಷ್ಕರಿಸಬೇಕೆಂದು ಅಭಿಪ್ರಾಯ ನೀಡಿದ್ದು, ಅದರಂತೆ ಕ್ರಮವಹಿಸಲಾಗಿರುವುದರಿಂದ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆ ಅನ್ಯಾಯವಾಗಿರುವುದಿಲ್ಲ. |
| ಆ | 2024 ಆಗಸ್ಟ 27 ಹಾಗೂ ಡಿಸೆಂಬರ್ 29 ರಂದು ನಡೆದ ಕೆ.ಎ.ಎಸ್ ಪೂರ್ವಭಾವಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳಲ್ಲಿ ಒಬ್ಬ ಕೆ.ಎ.ಎಸ್ ಅಧಿಕಾರಿಗೆ ಇರಬೇಕಾದ ಸಾಮಾನ್ಯ ಜ್ಞಾನ ಹಾಗೂ ಪೂರ್ವಭಾವಿ ಪಠ್ಯಕ್ರಮದಲ್ಲಿ ತಿಳಿಸಿರುವಂತೆ ಸಾಮಾನ್ಯ ಮನೋ ಸಾಮರ್ಥ್ಯ ಮನೋಶಕ್ತಿ, | ಕರ್ನಾಟಕ ಗೆಜೆಟೆಡ್ ಪ್ರೊಬೆಷನರುಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) (9ನೇ ತಿದ್ದುಪಡಿ) ನಿಯಮಗಳು, 2011ರಲ್ಲಿ ನಿಗದಿಪಡಿಸಿರುವ ಪಠ್ಯಕ್ರಮದನ್ವಯ ಸಾಮಾನ್ಯ ಮನೋಸಾಮರ್ಥ್ಯ ವಿಷಯಕ್ಕೆ 30 ಪ್ರಶ್ನೆಗಳನ್ನು ನಿಗದಿಪಡಿಸಲಾಗಿದ್ದು, ಅದರಂತೆ ಪ್ರಶ್ನೆ ಪತ್ರಿಕೆಯನ್ನು ಸಿದ್ಧಪಡಿಸಲಾಗಿರುತ್ತದೆ. |

| | | |
|---|---|---|
| | ಗ್ರಹಿಸುವಿಕೆ, ಪ್ರತಿಪಾದನೆ ಮತ್ತು ವಿಶ್ಲೇಷಣಾ ಸಾಮರ್ಥ್ಯ, ನಿರ್ಧಾರ ತೆಗೆದುಕೊಳ್ಳುವಿಕೆ ಮತ್ತು ದತ್ತಾಂಶದ ವ್ಯಾಖ್ಯಾನ, ನಕ್ಷೆಗಳು, ರೇಖಾ ಚಿತ್ರಗಳು, ಕೋಷ್ಟಕಗಳು, ದತ್ತಾಂಶ ದಕ್ಷತೆ, ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದ ಪ್ರಶ್ನೆಗಳೇ ಇಲ್ಲದೇ ಪ್ರಶ್ನೆ ಪತ್ರಿಕೆ ಸಿದ್ಧಪಡಿಸಿದ್ದು ನಿಜವೇ; | |
| ಇ | ಹಾಗಿದ್ದಲ್ಲಿ, ಇನ್ನು ಮುಂದೆಯಾದರೂ ಪೂರ್ವಭಾವಿ ಪಠ್ಯಕ್ರಮಕ್ಕನುಸಾರವಾಗಿ ಗುಣ ಮಟ್ಟದ ಪ್ರಶ್ನೆಗಳಿರುವ ಪ್ರಶ್ನೆ ಪತ್ರಿಕೆಗಳನ್ನು ಸಿದ್ಧಪಡಿಸಲು ಆಯೋಗವು ಕ್ರಮ ಕೈಗೊಳ್ಳಲಾಗುವುದೇ? | ಕರ್ನಾಟಕ ಗೆಜೆಟೆಡ್ ಪ್ರೊಬೆಷನರುಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) (9ನೇ ತಿದ್ದುಪಡಿ) ನಿಯಮಗಳು, 2011ರಲ್ಲಿ ನಿಗದಿಪಡಿಸಿರುವ ಪಠ್ಯಕ್ರಮದನುಸಾರವಾಗಿಯೇ ಪ್ರಶ್ನೆ ಪತ್ರಿಕೆಯನ್ನು ಸಿದ್ಧಪಡಿಸಲಾಗುತ್ತದೆ. |

**ಸಂಖ್ಯೆ: ಸಿಆಸುಇ 157 ಎಸ್‌ಎಸ್‌ಸಿ 2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ